**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ:12:ವರ್ಗಾವಣೆ:2022-23:ವ&ನಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:16.05.2022

ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ:16:ಸೇನೌವ:2022, ದಿನಾಂಕ:30.04.2022 ಅನ್ನು ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಮತ್ತು ಪ್ರಾದೇಶಿಕ ಜಂಟಿನಿರ್ದೇಶಕರುಗಳಿಗೆ ಪರಿಚಲಿಸುತ್ತಾ, ತಮ್ಮ ಕಾಲೇಜು/ಕಛೇರಿಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿ ವರ್ಗದವರ ಗಮನಕ್ಕೆ ತರುವಂತೆ ಸೂಚಿಸಿದೆ.

16/05/2022

**ಮುಖ್ಯ ಆಡಳಿತಾಧಿಕಾರಿಗಳು**
**ಕಾಲೇಜು ಶಿಕ್ಷಣ ಇಲಾಖೆ**

**ಇವರಿಗೆ**

1. ಎಲ್ಲಾ ಪ್ರಾದೇಶಿಕ ಜಂಟಿನಿರ್ದೇಶಕರುಗಳಿಗೆ - ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು**

1. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
2. ಕಛೇರಿ ಪ್ರತಿ.

TRN 12 2022

ಆಳಿ. 11/05/-

<u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** 2022-23ನೇ ಸಾಲಿನಲ್ಲಿ ಮಾಡುವ ಸರ್ಕಾರಿ ನೌಕರರ ಸಾರ್ವತ್ರಿಕ ವರ್ಗಾವಣೆ ಮಾರ್ಗಸೂಚಿಗಳ ಕುರಿತು.

<u>ಓದಲಾಗಿದೆ:-</u>

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ದಿನಾಂಕ: 07.06.2013.

ಇ.ಓ: 409880 / 16.05.2

<u>ಪ್ರಸ್ತಾವನೆ:-</u>

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಈ ಮಾರ್ಗಸೂಚಿಗಳ ಪ್ರಕಾರ ಸರ್ಕಾರಿ ನೌಕರರ ವರ್ಗಾವಣೆಗಳನ್ನು ಪ್ರತಿ ವರ್ಷ ಮೇ ಮತ್ತು ಜೂನ್ ತಿಂಗಳುಗಳಲ್ಲಿ ಮಾತ್ರ ಸದರಿ ಮಾರ್ಗಸೂಚಿಗಳಲ್ಲಿರುವ ಷರತ್ತುಗಳಿಗೊಳಪಟ್ಟು ಮಾಡಬಹುದಾಗಿದೆ.

2022-23ನೇ ಸಾಲಿಗೆ ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ವರ್ಗದ ಅಧಿಕಾರಿ/ನೌಕರರಿಗೆ ಅನ್ವಯವಾಗುವಂತೆ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡಾ 6ನ್ನು ಮೀರದಂತೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ಪ್ರತ್ಯಾಯೋಜಿಸಲು ನಿರ್ಧರಿಸಿರುವುದರಿಂದ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 16 ಸೇನೌವ 2022</u>**
**<u>ಬೆಂಗಳೂರು, ದಿನಾಂಕ: 30.04.2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು, 2022-23ನೇ ಸಾಲಿಗೆ ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ವರ್ಗದ ಅಧಿಕಾರಿ/ನೌಕರರಿಗೆ ಅನ್ವಯವಾಗುವಂತೆ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡ 6ನ್ನು ಮೀರದಂತೆ ದಿನಾಂಕ: 01.05.2022 ರಿಂದ ದಿನಾಂಕ: 15.06.2022 ರವರೆಗೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Thejavathi 30/04/2022
(ತೇಜಾವತಿ. ಎನ್.)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು – ವಿಶೇಷ ಕೋಶ)

ಇವರಿಗೆ

ಸಂಕಲನಕಾರರು, ಕರ್ನಾಟಕ ಇ-ರಾಜ್ಯಪತ್ರ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)/(ಇ&ಆರ್ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.

..2.